ಕರ್ನಾಟಕ ವಿಧಾನ ಪರಿಷತ್ತು

**ಮಾನ್ಯ ವಿಧಾನ ಪರಿಷತ್ ಸದಸ್ಯರಾದ ಶ್ರೀ ಮರಿತಿಬ್ಬೇಗೌಡ ಇವರ ಗಮನ ಸೆಳೆಯುವ ಸೂಚನೆ ನಿಯಮ 72 ಕ್ಕೆ ಉತ್ತರಿಸುವ ಕುರಿತು.**

**ಪ್ರಶ್ನೆ:**

ಸಮಾಜ ಕಲ್ಯಾಣ ಇಲಾಖೆಯಡಿಯ ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ವತಿಯಿಂದ ನಡೆಯುತ್ತಿರುವ ವಸತಿ ಶಾಲೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಖಾಯಂ ಶಿಕ್ಷಕರಿಗೆ ಡಿ.ಸಿ.ಆರ್.ಜಿ., ಕೆ.ಜಿ.ಐ.ಡಿ., ಜ್ಯೋತಿ ಸಂಜೀವಿನಿ ಮುಂತಾದ ಸೌಲಭ್ಯಗಳನ್ನು ಮಂಜೂರು ಮಾಡದೆ ಇರುವುದು. ವಸತಿ ಶಾಲೆಗಳಲ್ಲೇ ವಾಸವಿರುವ ಖಾಯಂ ಶಿಕ್ಷಕರಿಗೆ ಶೇ 10% ರಷ್ಟು ವಿಶೇಷ ಭತ್ಯೆ ನೀಡದೆ ಇರುವುದು ಎನ್.ಪಿ.ಎಸ್ ಯೋಜನೆಯಡಿಯ ಶಿಕ್ಷಕರಿಗೆ ಸರ್ಕಾರ ನೀಡಬೇಕಾದ ಪಾಲಿನ ಹಣವನ್ನು ಸಮಾನಾಂತರವಾಗಿ ಪಾವತಿಸದೆ ಇರುವುದು, ವಸತಿ ಶಾಲೆಗಳಲ್ಲಿನ ವಿದ್ಯಾರ್ಥಿಗಳಿಗೆ ನೀಡುತ್ತಿರುವ ಸೌಲಭ್ಯಗಳನ್ನು ಸಕಾಲದಲ್ಲಿ ವಿತರಿಸದೆ ಇರುವುದು ಹಾಗೂ ಮೂಲಭೂತ ಸೌಕರ್ಯಗಳ ಕೊರತೆ ಬಗ್ಗೆ ಉಂಟಾದ ಗಂಭೀರ ಸಮಸ್ಯೆ ಕುರಿತು ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಗಮನ ಸೆಳೆಯ ಬಯಸುತ್ತೇನೆ.

**ಉತ್ತರ:**

ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ವ್ಯಾಪ್ತಿಯಲ್ಲಿ 830 ವಸತಿ ಶಾಲೆ/ಕಾಲೇಜುಗಳು (ಪರಿಶಿಷ್ಟ ಜಾತಿ–503, ಪರಿಶಿಷ್ಟ ವರ್ಗ–156, ಹಿಂದುಳಿದ ವರ್ಗ–171) ಕಾರ್ಯನಿರ್ವಹಿಸುತ್ತಿವೆ. ಸದರಿ ವಸತಿ ಶಾಲೆಗಳಲ್ಲಿ ಒಟ್ಟು 19094 ಬೋಧಕ/ ಬೋಧಕೇತರ ಹುದ್ದೆಗಳು ಮಂಜೂರಾಗಿದ್ದು, ಈ ಪೈಕಿ 5821 ಖಾಯಂ ಬೋಧಕ/ಬೋಧಕೇತರ ಸಿಬ್ಬಂಧಿಗಳು ಕರ್ತವ್ಯ ನಿರ್ವಹಿಸುತ್ತಿದ್ದಾರೆ. ಸದರಿ ಖಾಯಂ ಸಿಬ್ಬಂದಿಗಳಿಗೆ ಸಂಬಂಧಿಸಿದ ಸೇವಾ ಸೌಲಭ್ಯಗಳ ವಿವರ ಈ ಕೆಳಕಂಡಂತಿದೆ.

**ಡಿ.ಸಿ.ಆರ್.ಜಿ**

ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ಕರ್ತವ್ಯ ನಿರ್ವಹಿಸುತ್ತಿರುವ ನೌಕರರಿಗೆ ದಿನಾಂಕ:01.04.2018 ರಿಂದ () ಕುಟುಂಬ ಪಿಂಚಣಿ ಯೋಜನೆಯ ಸೌಲಭ್ಯವನ್ನು ವಿಸ್ತರಿಸುವ ಬಗ್ಗೆ ಸರ್ಕಾರದ ಪತ್ರ ಸಂಖ್ಯೆ ಸಕಇ 498 ಮೂದೇಶಾ 2018 ದಿನಾಂಕ: 24.11.2018 ರಲ್ಲಿ ನೂತನ ಪಿಂಚಣಿ ಯೋಜನೆಯಡಿ ಬರುವ ಸರ್ಕಾರಿ ನೌಕರರಿಗೆ ಮಾತ್ರ ಎಂದು ಸ್ಪಷ್ಟವಾಗಿ

-----2

ತಿಳಿಸಿರುವುದರಿಂದ, ಈ ಸೌಲಭ್ಯವು ಸರ್ಕಾರದ ನಿಗಮ ಮಂಡಳಿಗಳು, ಸ್ವಾಯತ್ತ ಸಂಸ್ಥೆಗಳು ಹಾಗೂ ಸರ್ಕಾರದ ಅಧೀನದ ಇನ್ನಿತರ ಯಾವುದೇ ಸಂಘ ಸಂಸ್ಥೆಗಳ ನೌಕರರಿಗೆ ಅನ್ವಯಿಸುವುದಿಲ್ಲ. ಆದ್ದರಿಂದ, ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ನೌಕರರಿಗೆ ಈ ಸೌಲಭ್ಯವನ್ನು ವಿಸ್ತರಿಸಲು ಸಾಧ್ಯವಿಲ್ಲವೆಂದು ನಿರ್ದೇಶಿಸಿದೆ.

ಆದಾಗ್ಯೂ, ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ವಸತಿ ಶಾಲೆಯ ಶಿಕ್ಷಕರಿಗೆ ಇತರೆ ಎಲ್ಲಾ ಸರ್ಕಾರಿ ನೌಕರರುಗಳಿಗೆ ಅನ್ವಯವಾಗುವಂತೆ, ದಿನಾಂಕ:01.04.2018 ರಿಂದ **ಕುಟುಂಬ ಪಿಂಚಣಿ** ಯೋಜನೆಯ ಸೌಲಭ್ಯವನ್ನು ವಿಸ್ತರಿಸುವ ಪ್ರಸ್ತಾವನೆಯು ಪ್ರಸ್ತುತ ಆರ್ಥಿಕ ಇಲಾಖೆಯಲ್ಲಿ ಪರಿಶೀಲನೆಯಲ್ಲಿರುತ್ತದೆ.

<u>ಕೆ.ಜಿ.ಐ.ಡಿ.</u>

ಸರ್ಕಾರಿ ನೌಕರರಿಗೆ ನೀಡಲಾಗುವ ಕೆ.ಜಿ.ಐ.ಡಿ. ಸೌಲಭ್ಯವನ್ನು ವಿಸ್ತರಿಸುವ ಬಗ್ಗೆ ಸರ್ಕಾರದ ಅಧೀನದಲ್ಲಿ ಕಾರ್ಯನಿರ್ವಹಿಸುತ್ತಿರುವ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ವಸತಿ ಶಾಲೆಗಳ ನೌಕರರು ಖಾಯಂ ರಾಜ್ಯ ಸರ್ಕಾರಿ ನೌಕರರಿಗಾಗಿ ರೂಪಿಸಲಾಗಿರುವ ಕಡ್ಡಾಯ ಜೀವ ವಿಮಾ ನಿಯಮಗಳ ವ್ಯಾಪ್ತಿಗೆ ಒಳಪಡಿಸಲು ಅವಕಾಶವಿರುವುದಿಲ್ಲವೆಂದು ಆರ್ಥಿಕ ಇಲಾಖೆಯು ತಿರಸ್ಕರಿಸಿ ಹಿಂಬರಹ ನೀಡಲಾಗಿರುತ್ತದೆ.

<u>**ಜ್ಯೋತಿ ಸಂಜೀವಿನಿ**</u>

ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ವಸತಿ ಶಾಲೆ/ಕಾಲೇಜುಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಖಾಯಂ ಬೋಧಕ/ಬೋಧಕೇತರ ಸಿಬ್ಬಂದಿಗಳಿಗೆ ಜ್ಯೋತಿ ಸಂಜೀವಿನಿ ಯೋಜನೆ ಹಾಗೂ ನಗದು ರಹಿತ ಸೌಲಭ್ಯಗಳನ್ನು ನೀಡುವ ಸಂಬಂಧ ಸಂಘದ ಖಾಯಂ ನೌಕರರು ಹಾಗೂ ಅವಲಂಬಿತ ಕುಟುಂಬದ ಸದಸ್ಯರುಗಳಿಗೆ ನಗದು ರಹಿತ ವೈದ್ಯಕೀಯ ಚಿಕಿತ್ಸೆ ಒದಗಿಸಲು ಸುವರ್ಣ ಆರೋಗ್ಯ ಸುರಕ್ಷಾ ಟ್ರಸ್ಟ್ ರವರಿಗೆ ಕೋರಲಾಗಿ, ಸದರಿ ಟ್ರಸ್ಟ್ ರವರು ದಿ: 29.06.2021 ರಂದು ಸಭೆ ಸೇರಿ ಸಂಘದ ಖಾಯಂ ನೌಕರರು ಹಾಗೂ ಅವಲಂಬಿತ ಕುಟುಂಬದ ಸದಸ್ಯರುಗಳಿಗೆ ನಗದು ರಹಿತ ವೈದ್ಯಕೀಯ ಚಿಕಿತ್ಸೆ ಒದಗಿಸಲು ತಾತ್ವಿಕ ಒಪ್ಪಿಗೆ ನೀಡಿರುತ್ತಾರೆ. ಈ ಸಂಬಂಧ ಸದರಿ ಟ್ರಸ್ಟ್ ರವರು ನಗದು ರಹಿತ ವೈದ್ಯಕೀಯ ಸೌಲಭ್ಯ ನೀಡಲು ಹೆಚ್.ಆರ್.ಎಂ.ಎಸ್

----3

ತಂತ್ರಾಂಶದಲ್ಲಿ ಸಂಘದಿಂದ ನೌಕರರ ಮತ್ತು ಅವಲಂಬಿತರ ಸಂಬಂಧಿಸಿದ ಮಾಹಿತಿಯನ್ನು ನಮೂದಿಸಲು ಉಂಟಾಗಿದ್ದ ತಾಂತ್ರಿಕ ದೋಷವನ್ನು ಸುವರ್ಣ ಆರೋಗ್ಯ ಸುರಕ್ಷಾ ಟ್ರಸ್ಟ್ ಮತ್ತು ಹೆಚ್.ಆರ್.ಎಂ.ಎಸ್ ಸೆಲ್ ಅಧಿಕಾರಿಗಳ ಸಹಯೋಗದೊಂದಿಗೆ ತಾಂತ್ರಿಕ ದೋಷವನ್ನು ಪರಿಹರಿಸಲು ಕ್ರಮವಹಿಸಲಾಗಿದ್ದು, ಜ್ಯೋತಿ ಸಂಜೀವಿನಿ ಯೋಜನೆಯನ್ನು ಶೀಘ್ರವಾಗಿ ಅನುಷ್ಠಾನಗೊಳಿಸಲು ಕ್ರಮವಹಿಸಲಾಗುತ್ತಿದೆ.

**ಖಾಯಂ ಶಿಕ್ಷಕರಿಗೆ ಶೇ 10 ರಷ್ಟು ವಿಶೇಷ ಭತ್ಯೆ**

ವಸತಿ ಶಾಲೆಗಳ ಖಾಯಂ ಸಿಬ್ಬಂದಿಗಳಿಗೆ ಮೂಲ ವೇತನದ ಶೇ 10% ಶಾಲಾ ಕ್ಯಾಂಪಸ್ ವಿಶೇಷ ಭತ್ಯೆಯನ್ನು ಮಂಜೂರು ಮಾಡಲು ಸರ್ಕಾರದ ಕಡತ ಸಂಖ್ಯೆ: ಸಕಇ 64 ಮೊದೇಶಾ 2019 ರ ದಿ: 27.08.2019ರಂತೆ ಆರ್ಥಿಕ ಇಲಾಖೆಗೆ ಈ ಕುರಿತು ಪ್ರಸ್ತಾವನೆ ಸಲ್ಲಿಸಲಾಗಿದ್ದು, ಆರ್ಥಿಕ ಇಲಾಖೆಯ ಟಿಪ್ಪಣಿಯಲ್ಲಿ 6ನೇ ರಾಜ್ಯ ವೇತನ ಆಯೋಗವು ತನ್ನ ವರದಿಯಲ್ಲಿ ಈ ರೀತಿಯ ಭತ್ಯೆಗೆ ಯಾವುದೇ ಶಿಫಾರಸ್ಸು ಮಾಡಿರುವುದಿಲ್ಲವಾದ್ದರಿಂದ ಈ ಕ್ಯಾಂಪಸ್ ವಿಶೇಷ ಭತ್ಯೆ ಕೋರಿಕೆಯನ್ನು ಒಪ್ಪಲು ಸಾಧ್ಯವಿಲ್ಲವೆಂದು ತಿಳಿಸಿದೆ.

**ಎನ್.ಪಿ.ಎಸ್**

ಸಂಘದ ವಸತಿ ಶಾಲೆ/ಕಾಲೇಜುಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಖಾಯಂ ಸಿಬ್ಬಂದಿಗಳಿಗೆ ಸರ್ಕಾರದ ಆದೇಶ ಸಂಖ್ಯೆ ಸಕಇ 39 ಎಂಡಿಎಸ್ 2020 ದಿ:15.07.2022 ರಲ್ಲಿ ದಿನಾಂಕ 01.04.2019 ರಿಂದ ಜಾರಿಗೆ ಬರುವಂತೆ ಸರ್ಕಾರದ ವಂತಿಗೆಯನ್ನು ಶೇ 10 ರಿಂದ ಶೇ 14 ಕ್ಕೆ ಹೆಚ್ಚಿಸಿ ಆದೇಶಿಸಿದೆ. ಸಂಘದ ಖಾಯಂ ಸಿಬ್ಬಂದಿಗಳಿಗೆ ಶೇ.14 ರಷ್ಟು ಸರ್ಕಾರದ ವಂತಿಗೆಯನ್ನು ಪಾವತಿಸಲು ಹೆಚ್ಚುವರಿ ಅನುದಾನವನ್ನು ಪೂರಕ ಅಂದಾಜು -1 ರಲ್ಲಿ ಬಿಡುಗಡೆ ಮಾಡಲಾಗುವುದು ಎಂದು ತಿಳಿಸಿದ್ದು, ಅನುದಾನ ಬಿಡುಗಡೆಯಾದ ನಂತರ ಸಂಘದ ನೌಕರರ ವಂತಿಗೆಯ ವ್ಯತ್ಯಾಸದ ಮೊತ್ತವನ್ನು ಪಾವತಿಸಲು ಕ್ರಮವಹಿಸಲಾಗುವುದು.

ಮುಂದುವರೆದು, ಸಂಘದ ವ್ಯಾಪ್ತಿಯ ಖಾಯಂ ನೌಕರರುಗಳಿಗೆ ಇತರೆ ಸರ್ಕಾರಿ ನೌಕರರುಗಳಿಗೆ ನೀಡುತ್ತಿರುವಂತೆ ವೈದ್ಯಕೀಯ ವೆಚ್ಚ ಮರುಪಾವತಿ, ಕಾಲಕಾಲಕ್ಕೆ ಸರ್ಕಾರದಿಂದ ನಿಗದಿಪಡಿಸಿದ ವೇತನ ಶ್ರೇಣಿಯಂತೆ ವೇತನ ಬಡ್ತಿ ಹಾಗೂ ವೇತನ ಶ್ರೇಣಿ, ಗಳಿಕೆ ರಜೆ ನಗದೀಕರಣ ಸೌಲಭ್ಯ, ಮೃತಪಟ್ಟ ಖಾಯಂ ನೌಕರರ ಕುಟುಂಬದ ಸದ್ಯಸ್ಯರಿಗೆ ಅನುಕಂಪ ಆಧಾರದ ಮೇಲೆ ನಿಯಮಾನುಸಾರ ನೌಕರಿ ಹಾಗೂ ಇತ್ಯಾದಿ ಸೌಲಭ್ಯಗಳನ್ನು ಕಲ್ಪಿಸಲಾಗುತ್ತಿರುತ್ತದೆ.

----4

ಮೂಲಭೂತ ಸೌಲಭ್ಯ

ಸಂಘದ ಅಧೀನದಲ್ಲಿ ಕಾರ್ಯನಿರ್ವಹಿಸುತ್ತಿರುವ ವಸತಿ ಶಾಲೆ/ಕಾಲೇಜುಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ಅಗತ್ಯ ಮೂಲಭೂತ ಸೌಕರ್ಯಗಳಾದ ಶುಚಿ ಸಂಭ್ರಮ ಕಿಟ್‌ಗಳನ್ನು ಸಕಾಲದಲ್ಲಿ ಪೂರೈಕೆ ಮಾಡಲಾಗಿದೆ.

ಸಿದ್ದಪಡಿಸಿದ ಸಮವಸ್ತ್ರಗಳನ್ನು ಸರಬರಾಜು ಮಾಡಲು ಮೆ॥ ಕೆ.ಹೆಚ್.ಡಿ.ಸಿ. ಸಂಸ್ಥೆಗೆ ದಿನಾಂಕ: 08.07.2022 ರಂದು ಸರಬರಾಜು ಆದೇಶ ನೀಡಲಾಗಿದ್ದು, ಸರಬರಾಜು ಪ್ರಕ್ರಿಯೆ ಪ್ರಗತಿಯಲ್ಲಿರುತ್ತದೆ.

ನೋಟ್ ಪುಸ್ತಕ ಮತ್ತು ಲೇಖನ ಸಾಮಗ್ರಿಗಳನ್ನು ಸರಬರಾಜು ಮಾಡಲು ಮೆ॥ ಎಂ.ಎಸ್.ಐ.ಎಲ್. ರವರಿಗೆ ದಿ:03.06.2022 ರಂದು ಸರಬರಾಜು ಆದೇಶ ನೀಡಲಾಗಿದ್ದು, ಸರಬರಾಜು ಪ್ರಕ್ರಿಯೆ ಪ್ರಗತಿಯಲ್ಲಿರುತ್ತದೆ.

ಶೂ, ಸಾಕ್ಸ್, ಟೈ ಮತ್ತು ಬೆಲ್ಟ್ ಗಳನ್ನು ವಸತಿ ಶಾಲೆ/ಕಾಲೇಜುಗಳಿಗೆ ಪೂರೈಸಲು ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಲಾಗಿದ್ದು, ಆರ್ಥಿಕ ಇಲಾಖೆಯಲ್ಲಿ ಪರಿಶೀಲನೆಯಲ್ಲಿರುತ್ತದೆ.

ಸಂಘದ ಅಧೀನದಲ್ಲಿನ ಎಲ್ಲಾ ವಸತಿ ಶಾಲೆ/ಕಾಲೇಜುಗಳಿಗೆ ಮಾದರಿ ವಸತಿ ಶಾಲೆ/ಕಾಲೇಜಿಗೆ ನಿಗಧಿಪಡಿಸಿರುವ ಡೆಸ್ಕ್ ಕಂ ಬೆಂಚ್, ಟು ಟಯರ್ ಕಾಟ್ ಇತರೆ 43 ವಿವಿಧ ಬಗೆಯ ಮೂಲಭೂತ ಸೌಕರ್ಯಗಳಲ್ಲಿ ಈಗಾಗಲೇ ಲಭ್ಯವಿರುವ ಅನುದಾನದಲ್ಲಿ ಸರಬರಾಜು ಮಾಡಿರುವ ಮೂಲಭೂತ ಸೌಕರ್ಯಗಳನ್ನು ಹೊರತುಪಡಿಸಿ ಪ್ರಾಂಶುಪಾಲರು ಸಲ್ಲಿಸಿರುವ ಸಮಗ್ರ ಬೇಡಿಕೆಯಂತೆ ಅಗತ್ಯ ಮೂಲಭೂತ ಸೌಕರ್ಯಗಳನ್ನು ಒದಗಿಸಲು ಒಟ್ಟು ರೂ.593.54 ಕೋಟಿಗಳು ಅವಶ್ಯಕತೆ ಇರುತ್ತದೆ.

ಪ್ರಸ್ತುತ ಸರ್ಕಾರವು ಪರಿಶಿಷ್ಟ ಜಾತಿಯ 83, ಪರಿಶಿಷ್ಟ ವರ್ಗದ 52 ಹಾಗೂ ಹಿಂದುಳಿದ ವರ್ಗಗಳ 4 ವಸತಿ ಶಾಲೆ/ಕಾಲೇಜುಗಳಿಗೆ ಒಟ್ಟಾರೆ 139 ವಸತಿ ಶಾಲೆ/ಕಾಲೇಜುಗಳಿಗೆ ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ವಿವಿಧ ಖಾತೆಯಲ್ಲಿ ಲಭ್ಯವಿರುವ ಬಡ್ಡಿ ಹಣ ರೂ.91.77 ಕೋಟಿಗಳನ್ನು ಉಪಯೋಗಿಸಿಕೊಂಡು ಅತಿ ಅವಶ್ಯವಿರುವ ಸಾಮಗ್ರಿಗಳನ್ನು ಜಿಲ್ಲಾ ಹಂತದಲ್ಲಿ ಖರೀದಿಸಿ ಪೂರೈಸಲು ಟೆಂಡರ್ ಪ್ರಕ್ರಿಯೆಯು ಪ್ರಗತಿಯಲ್ಲಿರುತ್ತದೆ.

----5

ಮುಂದುವರೆದು, ಸ್ವಂತ ಕಟ್ಟಡ ಹೊಂದಿರುವ ಬೇಡಿಕೆ ಇರುವ 100 ವಸತಿ ಶಾಲೆ/ಕಾಲೇಜುಗಳಿಗೆ ಡೆಸ್ಕ್ ಕಂ ಬೆಂಚ್ ಗಳನ್ನು ನಿಯಮಾನುಸಾರ ಸರಬರಾಜು ಮಾಡಲು ಟೆಂಡರ್ ಆಹ್ವಾನಿಸಲಾಗಿದ್ದು, ಟೆಂಡರ್ ಪ್ರಕ್ರಿಯೆ ಪ್ರಗತಿಯಲ್ಲಿರುತ್ತದೆ.

ಮುಂದಿನ ಹಂತದಲ್ಲಿ ಅನುದಾನದ ಲಭ್ಯತೆಯ ಅನುಸಾರ ವಸತಿ ಶಾಲೆ/ಕಾಲೇಜುಗಳಿಗೆ ಅವಶ್ಯವಿರುವ ಎಲ್ಲಾ ಮೂಲಭೂತ ಸೌಕರ್ಯಗಳನ್ನು ಹಂತ ಹಂತವಾಗಿ ಒದಗಿಸಲು ಕ್ರಮವಹಿಸಲಾಗುವುದು.

ಸಕಇ 426 ಎಂಡಿಎಸ್ 2022

(ಕೋಟಾ ಶ್ರೀನಿವಾಸ ಪೂಜಾರಿ)